ದಿನಾಂಕ 01-12-2022 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿಗಳ ಪರ ವಕೀಲರಿಂದ**

ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯವಾಗಿರುತ್ತವೆ. ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ತಯಾರಿಸಲು ವಕೀಲರಿಗೆ ಮಾಹಿತಿಯನ್ನು ನಾನೇ ನೀಡಿರುತ್ತೇನೆ. ಸದರಿ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶಗಳನ್ನು ವಕೀಲರು ನನಗೆ ಗೊತ್ತಿರುವ ಭಾಷೆಯಲ್ಲಿ ಓದಿ ಹೇಳಿರುತ್ತಾರೆ. ಆದ್ದರಿಂದ ನಾನು ಹಾಜರುಪಡಿಸಿದ ದಾಖಲೆಗಳನ್ನು ನಿಶಾನೆಗೊಳಿಸಲು ವಿನಂತಿ.

ನಿಡಿ-75 ರ ರಸೀದಿಯನ್ನು ನೋಡುತ್ತಿದ್ದು ಅದನ್ನು ನಾನೇ ಬರೆದಿರುತ್ತೇನೆ, ಅದರಲ್ಲಿ ನನ್ನ ಸಹಿ ಇರುತ್ತದೆ. ಸದರಿ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದರಿಂದ ಅದನ್ನು ನಿಡಿ-75(ಎ) ಎಂದು ಗುರುತಿಸಲಾಯಿತು.

**ಪಾಟಿ ಸವಾಲುಃ ವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟಿ ಸವಾಲು ಮುಂದೂಡಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೆ.ಸರಿ.ಇದೆ.

ಸಿವಿಲ್ ನ್ಯಾಯಾಧೀಶರು
ಜೇವರ್ಗಿ